(೯)

## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರ್ ರವರು ನಿಯಮ-72 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದ ಪ್ರಕಾರ ಗ್ರಾಮ ಪಂಚಾಯತಿಗಳಿಗೆ ಪ್ರತಿ ಆರ್ಥಿಕ ವರ್ಷದಲ್ಲಿ ಬಿಡುಗಡೆ ಮಾಡುತ್ತಿರುವ ಶಾಸನಬದ್ಧ ಅನುದಾನವನ್ನು ಹೆಚ್ಚಿಸುವ ಕುರಿತು.

***

**ಉತ್ತರ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 206 ರಲ್ಲಿ ಗ್ರಾಮ ಪಂಚಾಯತಿಗಳಿಗೆ ಅನುದಾನ ಬಗ್ಗೆ ಉಪಬಂಧವಿದ್ದು, ಸರ್ಕಾರವು ಪ್ರತಿಯೊಂದು ಗ್ರಾಮ ಪಂಚಾಯತಿಗೆ ವಾರ್ಷಿಕವಾಗಿ ಅದು ಕಾಲಕಾಲಕ್ಕೆ ಅನುಸೂಚಿಸಬಹುದಾದಂತೆ ಅಂತಹ ಮೊಬಲಗಿನ, ಆದರೆ ಐದು ಲಕ್ಷ ರೂಪಾಯಿಗಳಿಗೆ ಕಡಿಮೆ ಇಲ್ಲದ ಅನುದಾನ ನೀಡತಕ್ಕದ್ದು ಮತ್ತು ನಿಧಿಯ ಲಭ್ಯತೆಗೆ ಒಳಪಟ್ಟು ಸರ್ಕಾರವು ರಾಜ್ಯ ಹಣಕಾಸು ಆಯೋಗವು ನಿರ್ಧರಿಸಬಹುದಾದಂತೆ ಪಂಚಾಯತ್‌ಗಳಿಗೆ ಅನುದಾನಗಳ ಅಂತಹ ಶೇಕಡಾವಾರನ್ನು ಹಂಚಿಕೆ ಮಾಡತಕ್ಕದ್ದು. ಅದರಲ್ಲಿ ಶೇಕಡಾ ಇಪ್ಪತ್ತು ಮುಕ್ತ (Untied) ಅನುದಾನಗಳಾಗಿರತಕ್ಕದ್ದು ಎಂದಿರುತ್ತದೆ.

ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಮತ್ತು ಜಿಲ್ಲಾ ಪಂಚಾಯತಿಗಳು ಆರ್ಥಿಕವಾಗಿ ಸಧೃಢವಾಗಲು ರಾಜ್ಯ ಸರ್ಕಾರಗಳ ಹಣಕಾಸು ಆಯೋಗಗಳ ಶಿಫಾರಸ್ಸಿನ್ವಯ ಅನುದಾನ ನೀಡಲಾಗುತ್ತಿದೆ. ಪ್ರಸ್ತುತ ರಾಜ್ಯ ಹಣಕಾಸು ಆಯೋಗದ ಶಿಫಾರಸ್ಸಿನಂತೆ, ಗ್ರಾಮ ಪಂಚಾಯತಿಗಳಿಗೆ ವಾರ್ಷಿಕವಾಗಿ ಸರಾಸರಿ ಶಾಸನಬದ್ಧ ಅನುದಾನವಾಗಿ ರೂ:20.00 ಲಕ್ಷಗಳ ಅನುದಾನ ನೀಡಲಾಗುತ್ತಿದೆ. ಅದರಂತೆ 2024-25 ನೇ ಸಾಲಿಗೆ ರೂ. 1202.18 ಕೋಟಿಗಳ ಅನುದಾನ ನಿಗಧಿಪಡಿಸಲಾಗಿದ್ದು, ವಾರ್ಷಿಕವಾಗಿ 4 ತ್ರೈಮಾಸಿಕ ಕಂತುಗಳಲ್ಲಿ ಅನುದಾನ ಬಿಡುಗಡೆ ಮಾಡುತ್ತಿದ್ದು, ಪ್ರಸ್ತುತ 3 ತ್ರೈಮಾಸಿಕ ಕಂತುಗಳಲ್ಲಿ ರೂ. 910.58 ಕೋಟಿಗಳ ಅನುದಾನ ಬಿಡುಗಡೆ ಮಾಡಲಾಗಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 267 ರನ್ವಯ ಪ್ರಸ್ತುತ 5 ನೇ ರಾಜ್ಯ ಹಣಕಾಸು ಆಯೋಗ ರಚಿತವಾಗಿದ್ದು, ಸದರಿ ಆಯೋಗವು ಜಿಲ್ಲಾ ಪಂಚಾಯತಿಗಳ, ತಾಲ್ಲೂಕು ಪಂಚಾಯತಿಗಳ ಮತ್ತು ಗ್ರಾಮ ಪಂಚಾಯತಿಗಳ ಹಣಕಾಸು ಪರಿಸ್ಥಿತಿ ಪರಾಮರ್ಶಿಸಲು ಮತ್ತು ಹಣಕಾಸು ಪರಿಸ್ಥಿತಿಯನ್ನು ಸುಧಾರಿಸಲು ಅವಶ್ಯಕವಾದ ಕ್ರಮಗಳನ್ನು ಕೈಗೊಳ್ಳಲು ಶಿಫಾರಸ್ಸು ಮಾಡಲು ತಿಳಿಸಲಾಗಿದೆ.

5ನೇ ರಾಜ್ಯ ಹಣಕಾಸು ಆಯೋಗವು ನೀಡುವ ಶಿಫಾರಸ್ಸಿನ ಆಧಾರದ ಮೇಲೆ ನಿಧಿಯ ಲಭ್ಯತೆಗೆ ಒಳಪಟ್ಟು ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಪ್ರತಿ ಆರ್ಥಿಕ ವರ್ಷದಲ್ಲಿ ಬಿಡುಗಡೆ ಮಾಡುತ್ತಿರುವ ಶಾಸನಬದ್ಧ ಅನುದಾನವನ್ನು ಹೆಚ್ಚಳ ಮಾಡಲು ಪರಿಶೀಲಿಸಲಾಗುವುದು.

**ಸಂಖ್ಯೆ: ಗ್ರಾಅಪ 615 ಗ್ರಾಪಂಅ 2024**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.